**ಅಸಲು ದಾವಾ ಸಂಖ್ಯೆ -207/2021** **ಪಿ.ಡಬ್ಲ್ಯೂ:-1**

ದಿನಾಂಕಃ **17-02-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲು :- ಪ್ರತಿವಾದಿ ಪರ ವಕೀಲರಿಂದ :-

ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಉಪವಿಭಾಗಾಧಿಕಾರಿಗಳ ನ್ಯಾಯಾಲಯ ದಾವಣಗೆರೆಯಲ್ಲಿ ಮೇಲ್ಮನವಿಯನ್ನು ಸಲ್ಲಿಸಿದ್ದೇನೆ ಎಂದರೆ ನನಗೆ ನೆನಪಿಲ್ಲ. ನಾನು, ಮಂಜಪ್ಪ ಬಿನ್ ರುದ್ರಪ್ಪ, ಬಸಮ್ಮ ಬಿನ್ ಬಸಪ್ಪ, ವೀರಪ್ಪ ಬಿನ್ ರುದ್ರಪ್ಪ, ಮಂಜಪ್ಪ ಬಿನ್ ರುದ್ರಪ್ಪ ರವರು ಉಪವಿಭಾಗಾಧಿಕಾರಿಗಳ ನ್ಯಾಯಾಲಯ ದಾವಣಗೆರೆಯಲ್ಲಿ ದಾಕ್ಷಾಯಣಮ್ಮ ಕೋಂ ಚನ್ನಬಸಪ್ಪರವರ ವಿರುದ್ಧ ಮೇಲ್ಮನವಿಯನ್ನು ಸಲ್ಲಿಸಿದ್ದೇನೆ ಎಂದರೆ ನನಗೆ ನೆನಪಿಲ್ಲ. ನಾವು ಸಲ್ಲಿಸಿದ ಮೇಲ್ಮನವಿಯು ದಿಃ **22-04-2017** ರಂದು ವಜಾಗೊಂಡಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಉಪವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಆದಂತಹ ಆದೇಶವನ್ನು ಪ್ರಶ್ನಿಸಿ ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ಮೇಲ್ಮನವಿಯನ್ನು ಸಲ್ಲಿಸಿದ್ದೀರಾ ಎಂದರೆ ನನಗೆ ಗೊತ್ತಿಲ್ಲ. ಉಪವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ನಾವು ಸಲ್ಲಿಸಿದ ಮೇಲ್ಮನವಿಯು ವಜಾಗೊಂಡ ನಂತರ ಸದರಿ ಆದೇಶವನ್ನು ಪ್ರಶ್ನಿಸಿ ಮೇಲ್ಮನವಿಯನ್ನು ಸಲ್ಲಿಸಿಲ್ಲ ಎಂದರೆ ನನಗೆ ಗೊತ್ತಿಲ್ಲ. ದಾವಾ ಆಸ್ತಿಯು ನಮ್ಮ ಹೆಸರಿಗೆ ಖಾತೆ ಆಗಬೇಕು ಎಂದು ದಾವೆಯನ್ನು ಸಲ್ಲಿಸಿದ್ದೆನು. ನಿಪಿ-**3** ಪಹಣಿ ದಾವಾ ಆಸ್ತಿಗೆ ಸಂಬಂಧಪಟ್ಟದ್ದಾಗಿದ್ದು ಮತ್ತು ಸದರಿ ಪಹಣಿಯು ಪ್ರತಿವಾದಿಯ ಹೆಸರಿನಲ್ಲಿರುತ್ತದೆ. ನಿಪಿ-**3** ರಲ್ಲಿ ಪ್ರತಿವಾದಿಯ ಹೆಸರು ಯಾವ ರೀತಿ ನಮೂದಾಯಿತು ಎಂಬ ಬಗ್ಗೆ ನನಗೆ ಗೊತ್ತಿಲ್ಲ. ಮೂಲ ಸರ್ವೇ ನಂ.**4** ರಲ್ಲಿ **2** ಎಕರೆ **10** ಗುಂಟೆ ಜಮೀನು ಇತ್ತು. ಸರ್ವೇ ನಂ.**4** ರಲ್ಲಿ ಯಾರು ಯಾರ ಹೆಸರಿಗೆ ಎಷ್ಟು ಜಮೀನು ಆಗಿದೆ ಎಂಬ ವಿಚಾರ ನನಗೆ ಗೊತ್ತಿಲ್ಲ. ಆದರೆ ನಮ್ಮ ತಂದೆಗೆ ಪೂರ್ವಭಾಗಕ್ಕೆ **2 ½**

ಗುಂಟೆ ಜಮೀನು ಬಂದಿರುತ್ತದೆ. ದಾವಾ ಆಸ್ತಿಯಲ್ಲಿ **2 ½** ಗುಂಟೆ ಜಮೀನು ನಮ್ಮ ತಂದೆಯ ಹೆಸರಿಗೆ ಬಂದಿಲ್ಲ ಎಂದರೆ ಸರಿಯಲ್ಲ. ನಿಪಿ-**1** ಮತ್ತು **2** ದಾಖಲೆಗಳನ್ನು ದಾವಾ ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ನಾವು ಸೃಷ್ಟಿ ಮಾಡಿದ್ದೇವೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಪ್ರತಿವಾದಿಗೆ ಹಕ್ಕು ಮತ್ತು ಹಿತಾಸಕ್ತಿ ಇದೆಯೇ ವಿನಃ ನಮಗೆ ಯಾವುದೇ ಹಕ್ಕು ಮತ್ತು ಹಿತಾಸಕ್ತಿ ಇಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಮಾಲೀಕರು ನಾನಲ್ಲ, ಪ್ರತಿವಾದಿ ಎಂದರೆ ಸರಿಯಲ್ಲ.

ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶಕೋರಿದ್ದು ನೀಡಿ ಮುಂದೂಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.